# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 241 | Pages. 2 | Date: 05-09-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 241 - ಪುಟಗಳು : 2 | 05-09-2026 | ಶನಿವಾರ | Ph: 8762954248 | ದರ : ₹1


## ಮಲೆನಾಡಗಾಂಧಿ ಹೆಚ್.ಜಿ.ಗೋವಿಂದೇಗೌಡ ಶತಮಾನೋತ್ಸವ ಸಮಾರಂಭ ಸೋಮವಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಲೆನಾಡಗಾಂಧಿ ಎಂದೇ ಖ್ಯಾತಿ ಪಡೆದಿದ್ದ ಮಾಜಿ ಶಿಕ್ಷಣ ಸಚಿವ ಎಚ್.ಜಿ. ಗೋವಿಂದೇಗೌಡರ ಶತಮಾನೋತ್ಸವವನ್ನು ಸೆ.7 ರಂದು ನಗರದಲ್ಲಿ ಆಚರಿಸಲಾಗುತ್ತಿದೆ ಎಂದು ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಪೇಗೌಡ ಹಾಗೂ ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ ಜಿಲ್ಲಾಧ್ಯಕ್ಷ ರವಿನಾಕಲಗೂಡು ತಿಳಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ ಜಿಲ್ಲಾ ಘಟಕದ ಸಹಯೋಗದಲ್ಲಿ ಅಂದು ಬೆಳಗ್ಗೆ 11 ಗಂಟೆಗೆ ನಗರದ ಎಂ.ಜಿ. ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಶತಮಾನೋತ್ಸವ ಸಮಾರಂಭ ಆಯೋಜಿಸಲಾಗಿದೆ ಎಂದರು.

ಜೆ.ಆರ್.ಕೆಂಚೇಗೌಡರು ಮಾತನಾಡಿ, ಗೋವಿಂದೇಗೌಡರು ಸರಳತೆ, ಪ್ರಾಮಾಣಿಕತೆ ಹಾಗೂ ಜನಪರ ಕಾಳಜಿಗೆ ಹೆಸರಾಗಿದ್ದರು. ಶಿಕ್ಷಣವನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ

ತಲುಪಿಸುವ ನಿಟ್ಟಿನಲ್ಲಿ ದೂರದೃಷ್ಟಿ ಮತ್ತು ಬದ್ಧತೆ ಹೊಂದಿದ್ದರು. ವಿಶೇಷವಾಗಿ ಗ್ರಾಮೀಣ ಪ್ರದೇಶದ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಆಶಯದೊಂದಿಗೆ ಶಿಕ್ಷಣದ ವಿಸ್ತರಣೆಗೆ ಒತ್ತು ನೀಡಿದ್ದರು. ಶಿಕ್ಷಣದ ಗುಣಮಟ್ಟ, ಶಿಕ್ಷಕರ ಗೌರವ ಹಾಗೂ ವಿದ್ಯಾರ್ಥಿಗಳ ಭವಿಷ್ಯದ ಕುರಿತು




ಅವರು ಹೊಂದಿದ್ದ ಕಾಳಜಿ ಇಂದಿಗೂ ಸ್ಮರಣೀಯ. ಅವರ ನೆನಪಿನಲ್ಲಿ ನಡೆಯುತ್ತಿರುವ ಕಾರ್ಯಕ್ರಮಕ್ಕೆ ಎಲ್ಲರೂ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ರವಿ ನಾಕಲಗೂಡು ಮಾತನಾಡಿ, ಕಾರ್ಯಕ್ರಮವನ್ನು ಸ್ಥಳೀಯ ಶಾಸಕ ಎಚ್.ಪಿ. ಸ್ವರೂಪ್ ಪ್ರಕಾಶ್ ಉದ್ಘಾಟಿಸಲಿದ್ದಾರೆ. ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಗೋವಿಂದೇಗೌಡರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಿದ್ದಾರೆ. ಕೆಯೂಡಬ್ಲ್ಯೂಜೆ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಮೊದಲ ಮಾತುಗಳನ್ನಾಡಲಿದ್ದಾರೆ. ಜೆ.ಆರ್.ಕೆಂಚೇಗೌಡರು ಅಧ್ಯಕ್ಷತೆ ವಹಿಸಲಿದ್ದು, ಗೋವಿಂದೇಗೌಡರ ಸುಪುತ್ರ ಹೆಚ್.ಜಿ.ವೆಂಕಟೇಶ್ ಅವರಿಗೆ ಗೌರವ ಸಮರ್ಪಣೆ ಇದ್ದು, ಸಂಸ್ಕೃತಿ ಚಿಂತಕ ಸುಧೀರ್ ಕುಮಾರ್ ಮುರೊಳ್ಳಿ ವಿಶೇಷ ಉಪನ್ಯಾಸ ನೀಡಲಿದ್ದಾರೆ ಎಂದರು.

ಕೆಯೂಡಬ್ಲ್ಯೂಜೆ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್ ಪ್ರಮೋದ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಿ.ಪಿ.ಕೃಷ್ಣೇಗೌಡ, ಜಿಲ್ಲಾ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೃಷ್ಣಮೂರ್ತಿ, ಜಿಲ್ಲಾ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ್ ಹಾಗೂ ಹಾಸನ ಜಿಲ್ಲಾ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ

> ಜಿಲ್ಲಾ ಪತ್ರಕರ್ತರ ಸಂಘದ ಸಾಂಸ್ಕೃತಿಕ ಸಮಿತಿ ಸ್ಟಡೀ ವಿತ್ ಸೊಸೈಟಿ ಪತ್ರಕರ್ತರ ಕಲಿಕೆಯ ತಾಣ ಕಾರ್ಯಕ್ರಮದಲ್ಲಿ ಶನಿವಾರ ಬೆಳಗ್ಗೆ 11 ಗಂಟೆಗೆ ಪತ್ರಕರ್ತರ ಭವನದಲ್ಲಿ ಡಿಜಿಟಲ್ ಯುಗದಲ್ಲಿ ಮಾಧ್ಯಮ ನೈತಿಕತೆ ಕುರಿತು ಮಾಧ್ಯಮ ತಜ್ಞರಾದ ಡಾ.ನಿರಂಜನ ವಾನಳ್ಳಿ ಮಾತನಾಡುವರು. ಜಿಲ್ಲಾಧ್ಯಕ್ಷರಾದ ಜೆ.ಆರ್.ಕೆಂಚೇಗೌಡರು ಅಧ್ಯಕ್ಷತೆ ವಹಿಸುವರು ಎಂದು ಚಲಂ ಹಾಡ್ಲಹಳ್ಳಿ ತಿಳಿಸಿದರು.

ಅಧ್ಯಕ್ಷರಾದ ಚೈತ್ರ ಮಂಜೇಗೌಡ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು.

ಶಿಕ್ಷಕರು, ಸರ್ಕಾರಿ ನೌಕರರು, ಪತ್ರಕರ್ತರು, ಶಿಕ್ಷಣಾಸಕ್ತರು, ಹಳೆಯ ವಿದ್ಯಾರ್ಥಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಮನವಿ ಮಾಡಿದರು.

ಗೋವಿಂದೇಗೌಡರ ಆದರ್ಶಗಳನ್ನು ಮತ್ತೊಮ್ಮೆ ಚರ್ಚೆಗೆ ತರುವ ಅಗತ್ಯವಿದೆ. ಅವರ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್. ಪ್ರಮೋದ್, ಸಾಂಸ್ಕೃತಿಯ ಸಮಿತಿಯ ಚಲಂ ಹಾಡ್ಲಹಳ್ಳಿ, ಸಿ.ಆರ್.ನವೀನ್, ಉಪಾಧ್ಯಕ್ಷ ಜಿ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಕಾರ್ಯದರ್ಶಿಗಳಾದ ಬಿ.ಆರ್. ಬೊಮ್ಮೇಗೌಡ, ಕೆ.ಎಂ.ಹರೀಶ್, ಖುಷ್ವಂತ್ ಇದ್ದರು.

## ಭೂ ವಂಚಕರ ಬಂಧನಕ್ಕೆ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಸೀಕೆರೆ ತಾಲೂಕಿನ ವಕೀಲ ಮಲ್ಲಿಕಾರ್ಜುನ್, ಮರುಳ ಸಿದ್ದಪ್ಪ ಹಾಗೂ ತಿಪಟೂರು ಎಂದು ಹೇಳಿಕೊಂಡಿರುವ ಮಹಾಂತೇಶ್‌ಗೌಡ ಎಂಬುವರು ಹಲವು ರೀತಿಯ ನಕಲಿ ದಾಖಲೆ ಸೃಷ್ಟಿಸಿ, ಅಮಾಯಕರ ಆಸ್ತಿಯನ್ನು ಕಬಳಿಸಲು ಮುಂದಾಗಿದ್ದಾರೆ ಎಂದು ರವಿಕುಮಾರ್ ಎಂಬುವರು ದೂರಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಾವಗಲ್ ಹೋಬಳಿ ಕುರುಬರಹಳ್ಳಿ ಗ್ರಾಮದ ಸ.ನಂ. 1/1 ರಲ್ಲಿ ರಾಮೇಗೌಡ ಬಿನ್ ಹೊಟ್ಟೇಗೌಡ ಎಂಬುವರ ಹೆಸರಿನಲ್ಲಿ 9.15 ಎಕರೆ ಪಿತ್ರಾರ್ಜಿತ ಆಸ್ತಿ ಇದೆ.

ಇದನ್ನು ಕಬಳಿಸಲು ಹಾಸನ ಉಪ ವಿಭಾಗಾಧಿಕಾರಿ ನ್ಯಾಯಾಲಯಕ್ಕೇ ಸುಳ್ಳು ಮಾಹಿತಿ ನೀಡಿ, ನನ್ನ ಬದಲಿಗೆ ರಾಮೇಗೌಡ ಎಂಬ ನಕಲಿ ಬೇರೊಬ್ಬನನ್ನು ಸೃಷ್ಟಿ ಮಾಡಿ ಇಷ್ಟೂ ಆಸ್ತಿಯನ್ನು ಕಬಳಿಸಲು ಹೊರಟಿದ್ದಾರೆ ಎಂದು ಆರೋಪಿಸಿದರು.

ಇಷ್ಟೇ ಮಾತ್ರವಲ್ಲ ರಾಮೇಗೌಡ ಅವರ ತಂದೆಗೆ ಒಬ್ಬರೇ ಪತ್ನಿ ಇದ್ದರೂ, ಮೂವರು ನಕಲಿ ದಾಖಲೆಯಲ್ಲಿ ಇಬ್ಬರು ಹೆಂಡತಿಯರು ಎಂದು ನಮೂದಿಸಿದ್ದಾರೆ. ಆಧಾರ್ ಕಾರ್ಡ್, ವಂಶವೃಕ್ಷ ಎಲ್ಲವನ್ನೂ ನಕಲಿ ಮಾಡಿದ್ದಾರೆ. ಕ್ರಮೇಣ ಇದು ನ್ಯಾಯಾಲಯಕ್ಕೂ ಮನವರಿಕೆ ಆಗಿ, ಆಸ್ತಿ ವರ್ಗಾವಣೆ ಆದೇಶವನ್ನು ನಿಜವಾದ ರಾಮೇಗೌಡರ ಪರ ನೀಡಿ, ವಂಚಕ ಆರೋಪಿಗಳನ್ನು ಬಂಧಿಸುವಂತೆ ಆದೇಶ ನೀಡಿದ್ದರೂ, ಪೊಲೀಸರು ವಿಳಂಬ ಮಾಡುತ್ತಿದ್ದಾರೆ ಎಂದು ಅಳಲು ತೋಡಿಕೊಂಡರು.

ಇದೊಂದು ಮಹಾವಂಚನೆಯಾಗಿದ್ದು, ಇಡೀ ಪ್ರಕರಣದ ಬಗ್ಗೆ ಸಮಗ್ರ ತನಿಖೆ ನಡೆಸಬೇಕು. ಆರೋಪಿಗಳನ್ನು ಕೂಡಲೇ ಬಂಧಿಸಿ,ನಿಜವಾದ ಭೂ ಮಾಲೀಕರಿಗೆ ನ್ಯಾಯ ಕೊಡಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ರಾಮೇಗೌಡ, ಅವರ ಪತ್ನಿ ನೀಲಮ್ಮ ಇದ್ದರು.

## ಆಸ್ಪತ್ರೆ ವಿರುದ್ಧ ಸುಳ್ಳು ಪ್ರಚಾರ: ಡಾ.ಬಸವರಾಜ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ:ತೀವ್ರ ಮೆದುಳು ಗಾಯ ಹಾಗೂ ರಕ್ತಸ್ರಾವದಿಂದ ನಮ್ಮ ಆಸ್ಪತ್ರೆಗೆ ದಾಖಲಾಗಿದ್ದ ರೋಗಿಗೆ ತುರ್ತು ಶಸ್ತ್ರಚಿಕಿತ್ಸೆ ನಡೆಸಿ, 5 ದಿನಗಳ ಕಾಲ ವೆಂಟಿಲೇಟರ್‌ನಲ್ಲಿ ಚಿಕಿತ್ಸೆ ನೀಡಿ ಅವರನ್ನು ಪ್ರಾಣಾಪಾಯದಿಂದ ಪಾರು ಮಾಡಲಾಗಿದೆ. ಜೊತೆಗೆ ಆಸ್ಪತ್ರೆಯ ಶುಲ್ಕದಲ್ಲಿ ರಿಯಾಯ್ತಿಯನ್ನೂ ನೀಡಲಾಗಿದ್ದರೂ ಆಸ್ಪತ್ರೆ ಮೇಲೆ ಸುಳ್ಳು ಆರೋಪ ಮಾಡಲಾಗಿದೆ ಎಂದು ಶ್ರೀ ಹಾಸನಾಂಬ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಡಾ. ಜಿ.ಎನ್.ಬಸವರಾಜು ಸ್ಪಷ್ಟಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಹೊಳೇನರಸೀಪುರ ತಾಲ್ಲೂಕಿನ ರೋಹಿತ್ ಎಂಬ ರೋಗಿ ಆ.30ರ ತಡರಾತ್ರಿ ಸುಮಾರು 1.30ಕ್ಕೆ ಅಪಘಾತದಿಂದ ತಲೆ ಮತ್ತು ಮೆದುಳಿಗೆ ತೀವ್ರ ಗಾಯಗಳಾಗಿ, ಹೆಚ್ಚಿನ ರಕ್ತಸ್ರಾವ ಉಂಟಾಗಿ ಆಸ್ಪತ್ರೆಗೆ ದಾಖಲಾಗಿದ್ದರು. ಉಸಿರಾಟಕ್ಕೂ ತೊಂದರೆ ಪಡುತ್ತಿದ್ದ. ಪರಿಸ್ಥಿತಿ ಅತ್ಯಂತ ಗಂಭೀರವಾಗಿತ್ತು. ತಕ್ಷಣವೇ ಅರವಳಿಕೆ ತಜ್ಞರು ಅಗತ್ಯ ಚಿಕಿತ್ಸಾ ಕ್ರಮ




ಕೈಗೊಂಡು ಶ್ವಾಸನಾಳದಲ್ಲಿ ಟ್ಯೂಬ್ ಅಳವಡಿಸಿ ಕೃತಕ ಉಸಿರಾಟದ ವ್ಯವಸ್ಥೆ ಮಾಡಿದರು.

ನರರೋಗ ತಜ್ಞರು ರೋಗಿ ತಲೆಯಲ್ಲಿ ಹೆಚ್ಚಿನ ಪ್ರಮಾಣದ ರಕ್ತಸ್ರಾವವಾಗಿದ್ದ ಹಿನ್ನೆಲೆ ತುರ್ತು ಶಸ್ತ್ರಚಿಕಿತ್ಸೆ ಮಾಡಿದರು. ರೋಗಿ ಇದೀಗ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಬಳಿಕ ರೋಗಿಗೆ 5 ದಿನಗಳ ಕಾಲ ವೆಂಟಿಲೇಟರ್ ಮೂಲಕ ಚಿಕಿತ್ಸೆ ನೀಡಲಾಗಿದ್ದು, ವೈದ್ಯರು ಹಾಗೂ ಸಿಬ್ಬಂದಿಯ ನಿರಂತರ ಆರೈಕೆಯಿಂದ ರೋಗಿ ಆರೋಗ್ಯದಲ್ಲಿ ದಿನದಿಂದ ದಿನಕ್ಕೆ ಚೇತರಿಕೆ ಕಂಡುಬಂದಿದೆ ಎಂದರು. ಆರೋಗ್ಯದಲ್ಲಿ ಸುಧಾರಣೆ ಕಂಡ ನಂತರ ಸಂಬಂಧಿಕರ ಮನವಿ ಮೇರೆಗೆ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಮತ್ತೊಂದು ಆಸ್ಪತ್ರೆಗೆ ಕರೆದೊಯ್ಯಲು ಡಿಸ್ಚಾರ್ಜ್ ಮಾಡಲಾಗಿದೆ ಎಂದು ಹೇಳಿದರು.

ರೋಗಿಗೆ ನೀಡಲಾದ ಎಲ್ಲ ರೀತಿಯ ಚಿಕಿತ್ಸಾ ವೆಚ್ಚ ಒಟ್ಟು 2 ಲಕ್ಷದ 4 ಸಾವಿರ ಬಿಲ್ ಆಗಿತ್ತು. ಅದರಲ್ಲಿ 45 ಸಾವಿರ ರಿಯಾಯ್ತಿಯನ್ನೂ ನೀಡಲಾಗಿದೆ. ಆದರೂ ಕಿಡಿಗೇಡಿಗಳು ಕುಡಿದು ಬಂದು ಸುಳ್ಳು ಆರೋಪ ಮಾಡಿ ಆಸ್ಪತ್ರೆಗೆ ಕೆಟ್ಟ ಹೆಸರು ತರುವ ಕೆಲಸ ಮಾಡಿದ್ದಾರೆ. ಸುಖಾಸುಮ್ಮನೆ ಗಲಾಟೆ ನಡೆಸಿ ಆಸ್ಪತ್ರೆಯ ವಿರುದ್ಧ ಮಾಡಿರುವ ಎಲ್ಲ ಆರೋಪ ನಿರಾಧಾರ ಎಂದರು. ಆಸ್ಪತ್ರೆಯ ವಿರುದ್ಧ ಮಾಧ್ಯಮಗಳಿಗೆ ನೀಡಿರುವ ಹೇಳಿಕೆ ತಪ್ಪಿನಿಂದ ಕೂಡಿದೆ ಎಂದು ವಿವರಿಸಿದರು.

ನಾಮೂ ಕಷ್ಟಪಟ್ಟು ರೋಗಿಗಳ ಪರವಾಗಿ ಸೇವೆ ಮಾಡುತ್ತಿದ್ದೇವೆ. ಆದರೂ ಕಿಡಿಗೇಡಿಗಳು ಆಸ್ಪತ್ರೆಗೆ ಆತಂಕ ತರಲು ಇಲ್ಲ ಸಲ್ಲದ ಆರೋಪ ಮಾಡಿರುವುದು ತೇಜೋವಧೆ ಮಾಡುವ ಉದ್ದೇಶದಿಂದ ಕೂಡಿದೆ ಎಂದು ತಿಳಿಸಿದರು. ಮುಂದೆ ಈ ರೀತಿಯ ಸುಳ್ಳು ಪ್ರಚಾರಗಳಿಗೆ ಯಾರೂ ಕಿವಿಗೊಡಬೇಡಿ. ಇಂಥ ಪ್ರಸಂಗ ಬಂದಾಗ ದಯವಿಟ್ಟು ನಮ್ಮ ಅಭಿಪ್ರಾಯವನ್ನೂ ಕೇಳಿ ಎಂದು ಬಸವರಾಜ್ ಮನವಿ ಮಾಡಿದರು.

ಆಸ್ಪತ್ರೆ ಆರಂಭವಾದ ದಿನದಿಂದಲೂ ರೋಗಿಗಳ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಹೆಚ್ಚಿನ ಆದ್ಯತೆ ನೀಡಿ, ವೈದ್ಯರು ಹಾಗೂ ಸಿಬ್ಬಂದಿ ನಿಷ್ಠೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಯಾವುದೇ ರೀತಿಯ ಲೋಪಕ್ಕೂ ಅವಕಾಶ ನೀಡಿಲ್ಲ.

ಆದ್ದರಿಂದ ವಾಸ್ತವಾಂಶ ಪರಿಶೀಲಿಸದೆ ಆಸ್ಪತ್ರೆ ವಿರುದ್ಧ ಸುಳ್ಳು ಸುದ್ದಿ ಹರಡಬೇಡಿ. ಏಕೆಂದರೆ ಕೆಟ್ಟದ್ದು ಹೆಚ್ಚು ಪ್ರಚಾರ ಆಗಲಿದೆ ಎಂದರು. ಸಮಾಜ ಸೇವಕ ಹರೀಶ್ ಹಾಗೂ ಆಸ್ಪತ್ರೆ ಸಿಬ್ಬಂದಿ ಇದ್ದರು.

## ಡಿಜಿಟಲ್ ಪುಸ್ತಕದಿಂದ ಉಪಯೋಗ: ಮಂಜುನಾಥ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮುದ್ರಣ ರೂಪದಲ್ಲಿದ್ದ ಪುಸ್ತಕಗಳು ಇಂದು ಡಿಜಿಟಲ್ ರೂಪವಾಗಿ ದೊರೆಯುತ್ತಿರುವುದು ಪುಸ್ತಕ ಓದುಗರಿಗೆ ಹಾಗೂ ವಿದ್ಯಾರ್ಥಿಗಳಿಗೆ ಮಾಹಿತಿ ಪಡೆದುಕೊಳ್ಳಲು ಸಹಕಾರಿಯಾಗಲಿದೆ ಎಂದು ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಗ್ರಂಥಪಾಲಕ ಡಾ.ಮಂಜುನಾಥ ಎಸ್.ಹೇಳಿದರು.

ನಗರದ ಗಂಧದಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಗ್ರಂಥಾಲಯ ಮತ್ತು ಮಾಹಿತಿ ವಿಭಾಗ ಹಾಗೂ ಐ.ಕ್ಯೂ.ಎ.ಸಿ. ಘಟಕದ ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಂಥಾಲಯಗಳು ಹಾಗೂ ಪುಸ್ತಕಗಳು ಇಂದು ಡಿಜಿಟಲ್ ಆಗಿ ಮಾರ್ಪಾಡಾಗುತ್ತಿರುವುದರಿಂದ ಪ್ರತಿಯೊಬ್ಬರಿಗೆ ಕೈ ಅಂಚಿನಲ್ಲಿಯೇ ಮಾಹಿತಿ ಪಡೆಯಬಹುದಾಗಿದೆ. ಪ್ರತಿಯೊಬ್ಬರೂ ತಂತ್ರಜ್ಞಾನ ಬಳಕೆ ಮಾಡುವ ಮೂಲಕ ತಮ್ಮ ಜ್ಞಾನ ಹೆಚ್ಚಿಸಿ




ಕೊಳ್ಳಬಹುದು ಎಂದರು.

ವಿಶ್ವ ಮಟ್ಟದಲ್ಲಿ ತಂತ್ರಜ್ಞಾನದ ಬಳಕೆ ದಿನೆ ದಿನೇ ಹೆಚ್ಚಾಗುತ್ತಲೇ ಇದ್ದು, ದೇಶದ ಬಹುತೇಕ ಗ್ರಂಥಾಲಯ ಗಳು ಇಂದು ತಾಂತ್ರಿಕವಾಗಿ ಉನ್ನತೀಕರಣ ಹೊಂದಿದ್ದು, ಯಾವುದೇ ಪುಸ್ತಕವನ್ನು ನಾವು ಅಂತರ್ಜಾಲದಲ್ಲಿ ವೀಕ್ಷಿಸಿ ಅಧ್ಯಯನ ಮಾಡಬಹುದಾಗಿದೆ ಎಂದರು.

ಅಧ್ಯಾಪಕರು ಹೆಚ್ಚು ತಂತ್ರಜ್ಞಾನದ ಬಳಕೆ ಮಾಡಿಕೊಳ್ಳುವುದರಿಂದ ಮಕ್ಕಳಿಗೂ ಇದರ ಬಗ್ಗೆ ತಿಳಿಸಿಕೊಡಲು ಸಹಕಾರಿ ಯಾಗುತ್ತದೆ.

ಉನ್ನತ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳು ತಂತ್ರಜ್ಞಾನ ಬಳಕೆ ಮಾಡಿಕೊಂಡು ಶಿಕ್ಷಣ ಪಡೆದರೆ ಸಮಾಜದಲ್ಲಿ ಉನ್ನತ ಸ್ಥಾನ ಪಡೆದುಕೊಳ್ಳಬಹುದಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ಸರಿಯಾದ ಪುಸ್ತಕಗಳು ದೊರೆಯದೆ ಇದ್ದ ಕಾಲಘಟ್ಟದಲ್ಲಿ ಅನೇಕರು ಇರುವ ಸೌಲಭ್ಯ ಬಳಕೆ ಮಾಡಿಕೊಂಡು ಉತ್ತಮ ಸಾಧನೆ ಮಾಡಿದ್ದಾರೆ.

ಕಂಪ್ಯೂಟರ್ ಇಲ್ಲದ ಕಾಲಘಟ್ಟದಲ್ಲಿ ವಿವಿಧ ಹುದ್ದೆಗಳಿಗೆ ಅರ್ಜಿ ಸಲ್ಲಿಕೆ ಮಾಡುವ ಸಂದರ್ಭದಲ್ಲಿ ಲಿಖಿತ ರೂಪ ದಲ್ಲಿಯೇ ಅರ್ಜಿ ಹಾಕಿ ದೊಡ್ಡ ದೊಡ್ಡ ಹುದ್ದೆಕೊಂಡವರು ಅನೇಕರಿದ್ದಾರೆ. ಆದರೇ ಇಂದು ಜಗತ್ತು ಬದಲಾಗಿದ್ದು, ಜ್ಞಾನದಿಂದ ಹಿಡಿದು ತಮಗೆ ಬೇಕಾದ ವಸ್ತುಗಳನ್ನು ಖರೀದಿ ಮಾಡುವ ವರೆಗೂ ಎಲ್ಲವನು ಕುಳಿತ ಜಾಗದಲ್ಲಿಯೇ ಮಾಡಬಹುದಾಗಿದೆ. ಹಾಗಾಗಿ ವಿದ್ಯಾರ್ಥಿಗಳು ತಮ್ಮ ಬಳಿ ಇರುವ ಮೊಬೈಲ್ ಅನ್ನು ಉತ್ತಮ ಕೆಲಸಗಳಿಗೆ ಬಳಕೆ ಮಾಡುವ ಮೂಲಕ ವಿದ್ಯಾಭ್ಯಾಸದ ಅವಧಿಯಲ್ಲಿ ಹೊಸ ತಂತ್ರಜ್ಞಾನದ ಮೂಲಕ ಹೆಚ್ಚಿನ ಜ್ಞಾ ಪಡೆದುಕೊಳ್ಳಬೇಕು. ಸರ್ಕಾರ ಅನೇಕ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಅರ್ಜಿ ಆಹ್ವಾನಿಸುತ್ತಿದ್ದು, ಯುವಕರು ತಮ್ಮ ವಿದ್ಯಾರ್ಹತೆಗೆ ಅನುಗುಣವಾಗಿ ಮೀಸಲಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಕೆ ಮಾಡಿ ಸರ್ಕಾರಿ ಕೆಲಸ ಪಡೆದುಕೊಳ್ಳುವ ನಿಟ್ಟಿನಲ್ಲಿ ಮುಂದಾಗಬೇಕು ಎಂದರು.

ಗ್ರಂಥಾಲಯ ಮತ್ತು ಮಾಹಿತಿ ವಿಭಾಗದ ಮುಖ್ಯಸ್ಥ ಡಾ. ಮರಿರಾಜ ವಾಸುದೇವ ಸೇಡಂ, ಐ.ಕ್ಯೂ.ಎ.ಸಿ. ಘಟಕದ ಸಂಚಾಲಕ ಡಾ. ಕಾಂತೇಶ್ ಸಣ್ಣಿಂಗಮ್ಮನವರ, ಅಧ್ಯಾಪಕರಾದ ಜಿ.ಆರ್. ಮೋಹನ್ ಕುಮಾರ್, ನಂದನ್ ಪಿ.,ಸುರೇಶ್ ಕುಮಾರ್, ಉಪನ್ಯಾಸಕ ದಿಲೀಪ್ ಕುಮಾರ್ ಎಚ್.ಕೆ ಇದ್ದರು.

## ‘ನನ್ಸಿರಿ’ ಕಾದಂಬರಿ ವಿಶ್ಲೇಷಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ : ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ(ರಿ.), ಬೆಂಗಳೂರು ಹಾಸನ ಜಿಲ್ಲಾ ಹಾಸನ ತಾಲ್ಲೂಕು ಘಟಕದ ವತಿಯಿಂದ ತಾಲ್ಲೂಕು ಅಧ್ಯಕ್ಷೆ ಕೆ.ಸಿ.ಗೀತಾರವರ ಅಧ್ಯಕ್ಷತೆಯಲ್ಲಿ 2026 ಸೆಪ್ಟಂಬರ್ 12 ಶನಿವಾರ ಸಾಯಂಕಾಲ 03 ಗಂಟೆಗೆ ಹಾಸನದ ರಿಂಗ್ ರಸ್ತೆ, ತನ್ವಿತ್ರಿಶಾ ಕಲ್ಯಾಣ ಮಂಟಪದೆದುರು ಉಡುಪಿ ಹೋಟೆಲ್ ಮೊದಲ ಮಹಡಿ ಸಭಾಂಗಣದಲ್ಲಿ ಕವಯಿತ್ರಿ ಹಾಗೂ ತಾಲ್ಲೂಕು ಕಾರ್ಯದರ್ಶಿ ಸಿ.ಎನ್. ನೀಲಾವತಿ ಅವರ ಪ್ರಾಯೋಜಕತ್ವದಲ್ಲಿ 44 ನೇ ಸಾಹಿತ್ಯ ಪಯಣ ಹೆಜ್ಜೆ ಕಾರ್ಯಕ್ರಮವನ್ನು ತಾಲ್ಲೂಕು ಅಧ್ಯಕ್ಷೆ ಕೆ.ಸಿ.ಗೀತಾ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧ್ಯಕ್ಷ ವಾಸು ಸಮುದ್ರವಳ್ಳಿ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಹಾಗೂ ಲೇಖಕ ಜಿ. ಪ್ರಕಾಶ್ ಅವರ ‘‘ನನ್ಸಿರಿ’’ ಕಾದಂಬರಿ ಕುರಿತು ಮಲ್ನಾಡ್ ನರ್ಸಿಂಗ್ ಹೋಂ ಖ್ಯಾತ ವೈದ್ಯರಾದ ಡಾ. ಎ. ಸಾವಿತ್ರಿಯವರು ವಿಶ್ಲೇಷಣೆ ಮಾಡಲಿದ್ದಾರೆ. ಗೋಷ್ಠಿಯಲ್ಲಿ ವೇದಿಕೆಯ ಕೇಂದ್ರ ಸಮಿತಿಯ ಪದಾಧಿಕಾರಿಗಳು, ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಪದಾಧಿಕಾರಿಗಳು, ತಾಲ್ಲೂಕು ಪದಾಧಿಕಾರಿಗಳು, ಜಿಲ್ಲೆಯ ಕವಿಗಳು ಭಾಗವಹಿಸಲಿದ್ದಾರೆ. ಕೃತಿ ವಿಮರ್ಶೆ ನಂತರ ಆಗಮಿತ ಕವಿಗಳಿಂದ ಕವಿಗೋಷ್ಠಿ ನಡೆಯಲಿದೆ. ಸಾಹಿತ್ಯಾಸಕ್ತ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮನವಿ ಮಾಡಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧ್ಯಕ್ಷ ವಾಸು ಸಮುದ್ರವಳ್ಳಿ -9449311298, ತಾಲ್ಲೂಕು ಅಧ್ಯಕ್ಷೆ ಕೆ.ಸಿ.ಗೀತಾ 9880889885, ಪ್ರಾಯೋಜಕರು ಹಾಗೂ ತಾಲ್ಲೂಕು ಕಾರ್ಯದರ್ಶಿ ಸಿ.ಎನ್.ನೀಲಾವತಿ 9620479071 ಸಂಪರ್ಕಿಸಬಹುದು.

## ಭೂಮಿ ಮಂಜೂರಿಗೆ ಮನವಿ: ಪ್ರತಿಭಟನೆ ಎಚ್ಚರಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ 80 ಅಡಿ ರಿಂಗ್ ರಸ್ತೆಯ ವಾರ್ಡ್ ನಂ.22 ರಲ್ಲಿ ಮುಸ್ಲಿಂ ಜನಾಂಗಕ್ಕೆ ಸೇರಿದ ಹೊಸ ಸುನ್ನಿ ಮತ್ತು ಖಬರ್‌ಸ್ಥಾನವಿದ್ದು, ಇದರ ಜಾಗವನ್ನು ರಸ್ತೆ ಅಗಲೀಕರಣ ಉದ್ದೇಶದಿಂದ ಸ್ವಾಧೀನ ಪಡಿಸಿಕೊಂಡು, ಬೇರೆಡೆ ಬದಲಿ ಜಾಗ ನೀಡಿದ್ದನ್ನು ಈಗ ರದ್ದುಪಡಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತ ಮುಸ್ಲಿಂ ಧಾರ್ಮಿಕ ಆಸ್ತಿ ಹಿತರಕ್ಷಣಾ ವೇದಿಕೆ ಆರೋಪಿಸಿದೆ.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಜ್ಯ ಪ್ರಧಾನ ಕಾರ್ಯದರ್ಶಿ ಸಮೀರ್ ಅಹಮದ್, ಖಬರ್‌ಸ್ಥಾನ್ ನಮ್ಮ ಸಮುದಾಯಕ್ಕೆ ಅನೇಕ ರೀತಿಯಲ್ಲಿ ಉಪಯೋಗ ಆಗುತ್ತಿತ್ತು. ಸುಮಾರು ಐದಾರು ಎಕರೆ ಪ್ರದೇಶವನ್ನು ಜಿಲ್ಲಾಡಳಿತ ಸ್ವಾಧೀನಪಡಿಸಿಕೊಂಡಿದೆ.

ನಮಗೆ ಬದಲಿ ಜಾಗ ಕೊಡಬೇಕು ಎಂದು ಸಮುದಾಯದ ಸಂಘಟನೆಗಳು, ಜನಪರ ಸಂಘಟನೆಗಳು ಸೇರಿ ಹಲವು ರೀತಿಯ ಪ್ರತಿಭಟನೆ ಮಾಡಿದ್ದೆವು. ಇದಾದ ಬಳಿಕ ಜಿಲ್ಲಾಡಳಿತ ನಾವು ಕೇಳಿದ ಐದು ಎಕರೆ ಬದಲಾಗಿ ಕೇವಲ ಒಂದು ಎಕರೆ ಮಂಜೂರು ಮಾಡಿದ್ದರು.

ಆದರೆ ಕೆಲ ವರ್ಷಗಳ ನಂತರ 2020ರಲ್ಲೇ ಯಾವುದೇ ಮುನ್ಸೂಚನೆ ನೀಡದೆ ಖಬರ್‌ಸ್ಥಾನದ ಹೆಸರಿಗೆ ಮಂಜೂರು




ಮಾಡಲಾಗಿದ್ದ ಜಾಗವನ್ನು ಡಿಸಿ ಅವರು ರದ್ದುಪಡಿಸಿದ್ದಾರೆ. ಇದರಿಂದ ನಮ್ಮ ಸಮಾಜಕ್ಕೆ ಬಹಳ ಅನ್ಯಾಯವಾಗಿದೆ ಎಂದು ಬೇಸರ ಹೊರ ಹಾಕಿದರು.

ಜಮೀನು ಮಂಜೂರು ಮಾಡಿ, ನಂತರ ರದ್ದು ಪಡಿಸಿರುವುದನ್ನು ಮರು ಪರಿಶೀಲನೆ ಮಾಡಬೇಕು. ಜಾಗವನ್ನು ಮತ್ತೆ ಮಂಜೂರು ಮಾಡಬೇಕು. ಇಲ್ಲದಿದ್ದರೆ ಹಿಂದಿನ ಹೋರಾಟಗಳು ಮರುಕಳಿಸಬಹುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಉಪಾಧ್ಯಕ್ಷ ರೆಹಮಾನ್ ಖಾನ್, ಸಂಚಾಲಕ ಮೊಹಮ್ಮದ್ ಸಿದ್ಧೀಕ್ ಅನ್ಸಾರಿ, ಸಮಾಜ ಸೇವಕ ತೌಫಿಕ್ ಪಾಷ ಇದ್ದರು.

## ಆನೆ ಸಾವು ತಡೆಗೆ ಒತ್ತಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಲೆನಾಡು ಭಾಗದ ಸಕಲೇಶಪುರ, ಆಲೂರು, ಬೇಲೂರು ಭಾಗಗಳಲ್ಲಿ ಕಾಡಾನೆ ಸಂತತಿ ವರ್ಷದಿಂದ ವರ್ಷಕ್ಕೆ ಜಾಸ್ತಿ ಆಗುತ್ತಿದ್ದು, ಯಾರದೋ ನಿರ್ಲಕ್ಷ್ಯಕ್ಕೆ ಕಾಡಾನೆಗಳು ಸಾಯುವುದನ್ನು ನಿಲ್ಲಿಸಬೇಕು ಎಂದು ಹೋರಾಟಗಾರ ಹುರುಡಿ ವಿಕ್ರಂಗೌಡ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಹಾರ ಹುಡುಕಿಕೊಂಡು ಆನೆ ಗುಂಪು ಒಂದು ಕಡೆಯಿಂದ ಮತ್ತೊಂದು ಕಡೆಗೆ ವಲಸೆ ಹೋಗುತ್ತಿವೆ. ಈ ಸಂದರ್ಭದಲ್ಲಿ ವಿದ್ಯುತ್ ಸ್ಪರ್ಶ ಮತ್ತಿತರ ಕಾರಣಗಳಿಂದ ಕಾಡಾನೆ ಸಾಯುತ್ತಿದ್ದು, ಇದು ಅರಣ್ಯ ಇಲಾಖೆ ಮತ್ತು ಕೆಇಬಿಯವರಿಗೆ ಗೊತ್ತಿದ್ದರೂ ತಡೆಗಟ್ಟಲು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ದೂರಿದರು.

ನಾಲ್ಕೈದು ದಿನಗಳ ಹಿಂದೆ ಗರ್ಭಿಣಿ ಹೆಣ್ಣಾನೆ ವಿದ್ಯುತ್ ಸ್ಪರ್ಶದಿಂದ ಮೃತಪಟ್ಟಿತು. ಇದು ನಿಲ್ಲಬೇಕಾದರೆ 9 ಮೀಟರ್ ಎತ್ತರದ ವಿದ್ಯುತ್ ಕಂಬ ನಿಲ್ಲಿಸಬೇಕು. ಕರೆಂಟ್ ಶಾಕ್‌ನಿಂದ ಆನೆಗಳು ಮೃತಪಟ್ಟರೆ ಅರಣ್ಯ ಇಲಾಖೆ ಮತ್ತು ಕೆಇಬಿ ಮೇಲೆಯೇ ಕೇಸು ಹಾಕಲಾಗುವುದು ಎಂದು ನ್ಯಾಯಾಲಯ ಎಚ್ಚರಿಸಿದ್ದರೂ ಆದರೂ ಪಾಲಿಸುತ್ತಿಲ್ಲ ಎಂದು ಬೇಸರ ಹೊರ ಹಾಕಿದರು.

ಇತ್ತೀಚಿನ ದಿನಗಳಲ್ಲಿ ಹಾಸನ, ಮೂಡಿಗೆರೆ ಮತ್ತು ಮಡಿಕೇರಿ ಭಾಗದಲ್ಲಿ 6 ಆನೆಗಳು ಜೀವ ಕಳೆದುಕೊಂಡಿವೆ. ಆದರೂ ಎಚ್ಚೆತ್ತುಕೊಳ್ಳುತ್ತಿಲ್ಲ. ಎತ್ತರದ ಕಂಬ ನಿಲ್ಲಿಸುತ್ತಿಲ್ಲ.




ಈ ಸಂಬಂಧ ಇನ್ನಾದರೂ ಸರ್ಕಾರ ಎಚ್ಚೆತ್ತುಕೊಳ್ಳಬೇಕು, ಅಧಿಕಾರಿಗಳು ಸಿಬ್ಬಂದಿಗಳನ್ನೇ ಹೊಣೆ ಮಾಡಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರೆಡಿಯೋ ಕಾಲರ್ ಅಳವಡಿಸಲು ಡಾಟ್ ಮಾಡಿದ ನಂತರ

ಅಡ್ಡಪರಿಣಾಮ ಆಗಿ ಎಷ್ಟೋ ಹೆಣ್ಣಾನೆಗಳಿಗೆ ಗರ್ಭಪಾತ ಆಗುತ್ತಿದೆ. ಕೆಲವು ಸಾಯುತ್ತಿವೆ. ರೆಡಿಯೋ ಕಾಲರ್ ಸಹ ಕಳಪೆ ಆಗಿ ಬಿದ್ದು ಹೋಗುತ್ತಿವೆ. ಆದರೂ ಆನೆಗಳಿಗೆ ಹಿಂಸೆ ನೀಡಲಾಗುತ್ತಿದೆ ಎಂದು ಆರೋಪಿಸಿದರು. ಆನೆಗಳ ಕಾರಿಡಾರ್‌ಗೆ ಅಡ್ಡ ಇರುವುದನ್ನು ತೆರವು ಮಾಡಿ ಎಂದು ಸುಪ್ರೀಂಕೋರ್ಟ್ ಆದೇಶವಿದ್ದರೂ ಅದರ ಬಗ್ಗೆ ಯಾರೂ ಗಮನ ಹರಿಸುತ್ತಿಲ್ಲ. ಆನೆಗಳು ಒಂದು ಕಡೆಯಿಂದ ಮತ್ತೊಂದು ಕಡೆಗೆ ಹೋಗಲು ರೈಲ್ವೆ ಬ್ಯಾರಿಕೇಡ್ ಅಳವಡಿಸಿರುವುದನ್ನು ತೆಗೆಯಬೇಕು ಎಂದು ಒತ್ತಾಯಿಸಿದರು. ಸರ್ಕಾರ ಗಮನ ಹರಿಸಿ ಆನೆ ಮತ್ತು ಮನುಷ್ಯರ ಜೀವಹಾನಿ ತಪ್ಪಿಸಬೇಕೆಂದು ಮನವಿ ಮಾಡಿದರು.

# ವಿದ್ಯೆ-ಜ್ಞಾನ ಜೀವನದ ಹಸಿವು ನೀಗಿಸುತ್ತದೆ: ಶ್ರೀ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಅನ್ನ ದೇಹದ ಹಸಿವನ್ನು ನೀಗಿಸಿದರೆ, ವಿದ್ಯೆ ಮತ್ತು ಜ್ಞಾನ ಮನುಷ್ಯ ಜೀವನದ ಹಸಿವನ್ನು ಶಾಶ್ವತವಾಗಿ ನೀಗಿಸುವ ಅಮೂಲ್ಯ ಸಂಪತ್ತಾಗಿದೆ. ಅದು ಜೀವನದುದ್ದಕ್ಕೂ ದಾರಿದೀಪವಾಗಿ ಗೌರವಯುತ ಬದುಕಿಗೆ ದಾರಿ ತೋರಿಸುತ್ತದೆ ಎಂದು ಪುಷ್ಪಗಿರಿಯ ಶ್ರೀ ಸೋಮಶೇಖರ ಶಿವಾಚಾರ್ಯ ಮಹಾಸ್ವಾಮೀಜಿ ಹೇಳಿದರು.

ಪಟ್ಟಣದ ಆರ್‌ವಿ ಕನ್ವೆನ್ಷನ್ ಹಾಲ್‌ನಲ್ಲಿ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ನಮ್ಮೂರು ನಮ್ಮ ಕೆರೆ ಹಾಗೂ ಸಾಮೂಹಿಕ ವರಮಹಾಲಕ್ಷ್ಮಿ ಪೂಜಾ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಹೊರಗಿನ ಕೊಳೆಯನ್ನು ನೀರು ಮತ್ತು ಸ್ನಾನದ ಮೂಲಕ ತೊಳೆದುಕೊಳ್ಳಬಹುದು. ಆದರೆ ಮನಸ್ಸಿನಲ್ಲಿರುವ ಅಹಂಕಾರ, ದ್ವೇಷ, ಅಸೂಯೆ, ದುಃಖದ ಮೈಲಿಗೆಯನ್ನು ಜ್ಞಾನ, ಧರ್ಮ ಮತ್ತು ಸತ್ಸಂಗದ ಮೂಲಕ ದೂರ ಮಾಡಿಕೊಳ್ಳಬೇಕು. ಜ್ಞಾನ ಮತ್ತು ಸಂಘಟನೆ ಶಕ್ತಿಯಿಂದ ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳುತ್ತಿರುವುದು ಶ್ಲಾಘನೀಯ ಎಂದರು.

ಹೆಗ್ಗಡೆಯವರು ಶಿಕ್ಷಣ, ಆರೋಗ್ಯ, ಗ್ರಾಮಾಭಿವೃದ್ಧಿ, ಮಹಿಳಾ ಸಬಲೀಕರಣ, ಜಲಸಂರಕ್ಷಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಾಡುತ್ತಿರುವ ಸೇವೆ ಅಪೂರ್ವವಾದುದು. ಲಕ್ಷಾಂತರ ಕುಟುಂಬ ಗಳಿಗೆ ಆತ್ಮವಿಶ್ವಾಸ ಮತ್ತು ಸ್ವಾವಲಂಬನೆಯ ದಾರಿ ತೋರಿಸಿರುವ ಅವರ ಸೇವೆ ಸಮಾಜಕ್ಕೆ ಮಾದರಿಯಾಗಿದೆ ಎಂದು ಬಣ್ಣಿಸಿದರು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಹೆಚ್.ಕೆ. ಸುರೇಶ್, ಹೆಗ್ಗಡೆಯವರು ರಾಜ್ಯಾದ್ಯಂತ ಶಿಕ್ಷಣ, ಆರೋಗ್ಯ, ಕೃಷಿ, ಮಹಿಳಾ ಸಬಲೀಕರಣ ಹಾಗೂ ಜಲಸಂರಕ್ಷಣೆ ಸೇರಿ ಸಮಾಜಕ್ಕೆ ಅತ್ಯಗತ್ಯವಾದ ಹಲವು ಕ್ಷೇತ್ರಗಳಲ್ಲಿ ನಿರಂತರ ಸಮಾಜಮುಖಿ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ಹಿತ್ತಲ ಗಿಡ ಮದ್ದಲ್ಲ ಎಂಬ ಗಾದೆಯಂತೆ ನಮ್ಮ ಸುತ್ತಮುತ್ತ ನಡೆಯುತ್ತಿರುವ ಇಂತಹ ಮಹತ್ವದ ಸೇವಾ ಕಾರ್ಯಗಳನ್ನು ಗುರುತಿಸಿ ಗೌರವಿಸಬೇಕು. ಕೃಷಿ, ಶಿಕ್ಷಣ ಮತ್ತು ಆರೋಗ್ಯ ಸಮಾಜದ ಅಭಿವೃದ್ಧಿಯ ಪ್ರಮುಖ ಆಧಾರಗಳಾಗಿದ್ದು, ಈ ಕ್ಷೇತ್ರಗಳಿಗೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನೀಡುತ್ತಿರುವ ಕೊಡುಗೆ ಅತ್ಯಂತ ಮಹತ್ವದ್ದಾಗಿದೆ ಎಂದರು.

ಮಹಿಳೆ ಅಬಲೆಯಲ್ಲ, ಸಬಲೆ ಎಂಬುದನ್ನು ಧರ್ಮಸ್ಥಳದ ಸ್ವಸಹಾಯ ಸಂಘಗಳ ಮಹಿಳೆಯರು ತಮ್ಮ ಪರಿಶ್ರಮದ ಮೂಲಕ ಸಾಬೀತು ಪಡಿಸಿದ್ದಾರೆ. ಆರ್ಥಿಕ ಸ್ವಾವಲಂಬನೆ ಜೊತೆಗೆ ಮಹಿಳೆಯರಲ್ಲಿ ಆತ್ಮವಿಶ್ವಾಸ ಹಾಗೂ ನಾಯಕತ್ವ ಗುಣ ಬೆಳೆಸುತ್ತಿರುವ ಸಂಸ್ಥೆಯ ಕಾರ್ಯ ಅಭಿನಂದನಾರ್ಹವಾಗಿದೆ.

ನಮ್ಮೂರು ನಮ್ಮ ಕೆರೆ ಯೋಜನೆ ಮೂಲಕ ಜಲ ಸಂರಕ್ಷಣೆಗೆ ನೀಡುತ್ತಿರುವ ಆದ್ಯತೆ ಕೃಷಿ ಹಾಗೂ ಗ್ರಾಮೀಣ ಬದುಕಿಗೆ ಬಹುದೊಡ್ಡ ಕೊಡುಗೆಯಾಗಿದೆ ಎಂದು ಹೇಳಿದರು.

> ಮಕ್ಕಳಿಗೆ ಕೇವಲ ವಿದ್ಯಾಭ್ಯಾಸ ಕೊಡಿಸುವುದಷ್ಟೇ ಪೋಷಕರ ಜವಾಬ್ದಾರಿಯಲ್ಲ. ವಿದ್ಯೆಯ ಜೊತೆಗೆ ಉತ್ತಮ ಸಂಸ್ಕಾರ, ಮಾನವೀಯ ಮೌಲ್ಯ, ಪ್ರೀತಿ ಹಾಗೂ ಹಿರಿಯರನ್ನು ಗೌರವಿಸುವ ಗುಣ ಬೆಳೆಸಬೇಕು. ಮಕ್ಕಳು ಉತ್ತಮ ವ್ಯಕ್ತಿತ್ವ ರೂಪಿಸಿಕೊಂಡು ಸಮಾಜಕ್ಕೆ ಮಾದರಿಯಾಗುವಂತೆ ಪೋಷಕರು ಮಾರ್ಗದರ್ಶನ ನೀಡಬೇಕು.
> **- ಶ್ರೀ ಸೋಮಶೇಖರ ಸ್ವಾಮೀಜಿ**

ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೈಸೂರು ವಿಭಾಗೀಯ ಪ್ರಾದೇಶಿಕ ನಿರ್ದೇಶಕ ಯೋಗೀಶ್ ಮಾತನಾಡಿದರು.

ತಾಲೂಕು ಯೋಜನಾಧಿಕಾರಿ ಮಂಜುಳ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಂದಾವರ ಗ್ರಾಮದ ಕೆ.ಎ. ಮಂಜುನಾಥಗೌಡ ಅಧ್ಯಕ್ಷತೆ ವಹಿಸಿದ್ದರು. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ವೆಂಕಟೇಶ್, ಜಿಲ್ಲಾ ಜನ ಜಾಗೃತಿ ವೇದಿಕೆ ಉಪಾಧ್ಯಕ್ಷ ಎಸ್.ಕೆ. ನಾಗೇಶ್, ಗ್ರಾಪಂ ಪಿಡಿಒ ಅರುಣ, ಯೋಜನೆಯ ಪದಾಧಿಕಾರಿಗಳು ಇದ್ದರು.

# ಆಕಾಶದ ಅಪರೂಪದ ದೃಶ್ಯ ಕಂಡು ಜನರಲ್ಲಿ ಕುತೂಹಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಹಾಸನ ನಗರದಲ್ಲಿ ಇಂದು ಮಧ್ಯಾಹ್ನ ಸೂರ್ಯನ ಸುತ್ತ 'ಸನ್ ಹ್ಯಾಲೋ' ಎಂಬ ಅಪರೂಪದ ಆಕಾಶದೃಶ್ಯ ಗೋಚರಿಸಿದ್ದು, ಸಾರ್ವಜನಿಕರ ಗಮನ ಸೆಳೆಯಿತು.

ಸೂರ್ಯನ ಸುತ್ತ ದೊಡ್ಡ ವೃತ್ತದಂತೆ ಕಾಣಿಸಿಕೊಂಡ ಪ್ರಕಾಶಮಾನವಾದ ಈ ವಲಯವನ್ನು ಹಲವರು ತಮ್ಮ ಮೊಬೈಲ್‌ಗಳಲ್ಲಿ ಸೆರೆಹಿಡಿದು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದಾರೆ. ಮೋಡಗಳ ನಡುವೆ ಸೂರ್ಯನ ಸುತ್ತಲೂ ಕಂಡುಬಂದ ಈ ಬೆಳಕಿನ ವೃತ್ತ ಕೆಲಕಾಲ ಸ್ಪಷ್ಟವಾಗಿ ಗೋಚರಿಸಿತು.

ವಾತಾವರಣದ ಮೇಲ್ಭಾಗದಲ್ಲಿರುವ ತೆಳುವಾದ ಹಿಮಸ್ಫಟಿಕ ಮೋಡಗಳ ಮೂಲಕ ಸೂರ್ಯನ ಬೆಳಕು



ವಕ್ರೀಭವನಗೊಂಡಾಗ ಸಾಮಾನ್ಯವಾಗಿ ಇಂತಹ ಸನ್ ಹ್ಯಾಲೋ ಉಂಟಾಗುತ್ತದೆ. ಹಾಸನದಲ್ಲಿ ಇಂದು ಕಂಡುಬಂದ ಈ ದೃಶ್ಯ ಆಕಾಶದತ್ತ ಜನರು ಕುತೂಹಲದಿಂದ ನೋಡುವಂತೆ ಮಾಡಿತು.

## ಅರಕಲಗೂಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜು: ನನ್ನ ಮೆಚ್ಚಿನ ಪುಸ್ತಕ ಓದು

ಕರ್ನಾಟಕ ಸರ್ಕಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅರಕಲಗೂಡು ವತಿಯಿಂದ ದಿ. 14-9-2026 ಶುಕ್ರವಾರ ಬೆ. 11.30ಕ್ಕೆ ಕಾಲೇಜು ಸಭಾಂಗಣದಲ್ಲಿ ನನ್ನ ಮೆಚ್ಚಿನ ಪುಸ್ತಕ ಓದು ಮತ್ತು ವಿಶೇಷ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಡಾ. ಬಿ.ಡಿ.ಕುಮಾರ್, ನಿವೃತ್ತ ಉಪನ್ಯಾಸಕರು, ಗುಡ್ಡದಮನೆ, ಬಾಗೇಶಪುರ ನೆರವೇರಿಸುವರು. ಅಧ್ಯಕ್ಷತೆಯನ್ನು ಶ್ರೀ ಮಂಜುನಾಥ ಎ.ಎಲ್. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅರಕಲಗೂಡು ವಹಿಸುವರು. ಡಾ.ಕುಶಾಲ್ ಬರಗೂರು, ಸಂಯೋಜಕರು ಹಾಗೂ ಸದಸ್ಯರು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ಇವರಿಂದ ಆಶಯನುಡಿ, ಶ್ರೀಮತಿ ಸುಶೀಲಾ ಸೋಮಶೇಖರ್, ಸಾಹಿತಿಗಳು, ಹಾಸನ ಇವರಿಂದ ವಿಶೇಷ ಉಪನ್ಯಾಸ ಇರುವುದು. ಮುಖ್ಯ ಅತಿಥಿಗಳಾಗಿ ಶ್ರೀ ಗೊರೂರು ಅನಂತರಾಜು, ಸಾಹಿತಿಗಳು ಹಾಗೂ ಸಂಚಾಲಕರು, ಜಿಲ್ಲಾ ಜಾಗೃತಿ ಸಮಿತಿ, ಹಾಸನ, ಶ್ರೀ ಸುಂದರೇಶ್ ಉಡುವಾರೆ, ಲೇಖಕರು, ಶ್ರೀ ಬಾಲಾಜಿ ಎ.ಆರ್.ಸಿ.ಡಿ.ಸಿ. ಕಾರ್ಯಾಧ್ಯಕ್ಷರು ಭಾಗವಹಿಸುವರು.

# ಸ್ಕಾಲರ್ಸ್ ಶಾಲೆಯಲ್ಲಿ ಕಳೆಗಟ್ಟಿದ ಶ್ರೀಕೃಷ್ಣ ಜನ್ಮಾಷ್ಟಮಿ

## ಬೆಣ್ಣೆ ಕೃಷ್ಣರಾಗಿ, ಮುದ್ದಾಗಿ ಕಂಗೊಳಿಸಿದ ಪುಟಾಣಿಗಳು




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಶಾಲಾ ಆವರಣದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಬಾಲ ನವನೀತರಿಗೆ ಬೆಣ್ಣೆಯನ್ನು ತಿನ್ನಿಸುವ ಮೂಲಕ ಉದ್ಘಾಟಿಸಿ, ಅತ್ಯಂತ ಸಂಭ್ರಮ ಹಾಗೂ ಭಕ್ತಿಭಾವದಿಂದ ಆಚರಿಸಲಾಯಿತು. ಶ್ರೀಕೃಷ್ಣನ ಜೀವನ, ಬೋಧನೆಗಳು ಹಾಗೂ ಮೌಲ್ಯಗಳನ್ನು ಮಕ್ಕಳಿಗೆ ಪರಿಚಯಿಸುವ ಸದುದ್ದೇಶದಿಂದ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದಲ್ಲಿ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು.

ಹಬ್ಬದ ಅಂಗವಾಗಿ ಶಾಲೆಯ ಪುಟಾಣಿ ಮಕ್ಕಳು ಶ್ರೀಕೃಷ್ಣ ಹಾಗೂ ರಾಧೆಯ ವೇಷಭೂಷಣ ಧರಿಸಿ ಎಲ್ಲರ ಗಮನ ಸೆಳೆದರು. ಬಣ್ಣಬಣ್ಣದ ವಸ್ತ್ರಗಳು, ತಲೆಗೊಂದು ಕಿರೀಟ, ಕೈಯಲ್ಲಿ ಕೊಳಲು ಹಿಡಿದು ಸುಂದರ ಅಲಂಕಾರದಲ್ಲಿ ಮುದ್ದಾಗಿ ಕಂಗೊಳಿಸಿದರು. ರಾಧಾ-ಕೃಷ್ಣರ ವೇಷದಲ್ಲಿದ್ದ ಮಕ್ಕಳ ನಗು, ಮುಗ್ಧತೆ ಮತ್ತು ಉತ್ಸಾಹ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು. ಕೃಷ್ಣ ಹಾಗೂ ರಾಧೆಯ ವೇಷದಲ್ಲಿ ಪುಟಾಣಿಗಳು ನೀಡಿದ ನೃತ್ಯ ಪ್ರದರ್ಶನ ನೋಡುಗರ ಕಣ್ಮನ ಸೆಳೆಯಿತು.

ಸಂಸ್ಕೃತಿ ಮತ್ತು ಮೌಲ್ಯಗಳ ಪರಿಚಯ

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶ್ರೀಯುತ ಪರಮೇಶ್ವರ ಭಟ್ಟರವರು ಮಾತನಾಡಿ, ಶ್ರೀಕೃಷ್ಣನ ಬಾಲಲೀಲೆಗಳು, ಧರ್ಮ, ಸತ್ಯ, ಪ್ರೀತಿ ಮತ್ತು ಕರ್ತವ್ಯದ ಮಹತ್ವವನ್ನು ಮಕ್ಕಳಿಗೆ ಎಳೆಎಳೆಯಾಗಿ ವಿವರಿಸಿದರು. "ಮಕ್ಕಳ ಸಕ್ರಿಯ ಭಾಗವಹಿಸುವಿಕೆಯಿಂದ ಶಾಲಾ ಆವರಣವು ಹಬ್ಬದ ವಾತಾವರಣದಿಂದ ಕಂಗೊಳಿಸುತ್ತಿದೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಆಡಳಿತಾಧಿಕಾರಿ ಡಾ. ಎಚ್. ಎನ್. ಚಂದ್ರಶೇಖರ್ ಅವರು ಮಾತನಾಡಿ, ''ಮಕ್ಕಳಲ್ಲಿ ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ, ಹಬ್ಬಗಳ ಮಹತ್ವವನ್ನು ಸಂತೋಷದಿಂದ ಅನುಭವಿಸುವ ಅವಕಾಶ ನೀಡುವುದು ನಮ್ಮ ಮುಖ್ಯ ಉದ್ದೇಶವಾಗಿದೆ'' ಎಂದು ತಿಳಿಸುತ್ತಾ ಪುಟಾಣಿ ಗೋಪಿ-ಗೋಪಿಕೆಯರಿಗೆ ಶುಭಕೋರಿದರು.

ಈ ಸುಂದರ ಕಾರ್ಯಕ್ರಮದಲ್ಲಿ ಶಾಲೆಯ ಕಾರ್ಯದರ್ಶಿ ಶ್ರೀಮತಿ ಮಮತಾ ಚಂದ್ರಶೇಖರ್, ಮುಖ್ಯೋಪಾಧ್ಯಾಯರು, ಶಿಕ್ಷಕವೃಂದ ಹಾಗೂ ಪೋಷಕರು ಉಪಸ್ಥಿತರಿದ್ದು, ಸಂಭ್ರಮದಲ್ಲಿ ಪಾಲ್ಗೊಂಡು ಪುಟಾಣಿ ರಾಧಾ-ಕೃಷ್ಣರಿಗೆ ಶುಭಾಶಯಗಳನ್ನು ಕೋರಿದರು. ಜನ್ಮಾಷ್ಟಮಿ ಆಚರಣೆಯು ಮಕ್ಕಳಲ್ಲಿ ಸಾಂಸ್ಕೃತಿಕ ಮೌಲ್ಯಗಳು, ಸೃಜನಶೀಲತೆ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುವ ಸುಂದರ ಅನುಭವವಾಗಿ ಮೂಡಿಬಂದಿತು.

# ಪಿಓಪಿ ಗಣೇಶ ಮೂರ್ತಿಗಳ ಸಂಗ್ರಹಣೆ ಮಾರಾಟ, ವಿತರಣೆ ನಿಷೇಧ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಅರಸೀಕೆರೆ ನಗರಸಭೆ ವ್ಯಾಪ್ತಿಯಲ್ಲಿ ಪ್ಲಾಸ್ಟರ್ ಆಫ್ ಪ್ಯಾರೀಸ್(ಪಿ.ಓ.ಪಿ) ಹಾಗೂ ರಾಸಾಯನಿಕ ಗುಣವುಳ್ಳ ವಸ್ತುಗಳನ್ನು ಬಳಸಿ ತಯಾರಿಸಲಾಗಿರುವ ಗೌರಿ-ಗಣೇಶ ಪ್ರತಿಮೆಗಳ ಉತ್ಪಾದನೆ ಹಾಗೂ ಮಾರಾಟ ಮತ್ತು ವಿಸರ್ಜನೆಯನ್ನು ನಿಷೇದಿಸಲಾಗಿದೆ ಎಂದು ಅರಸೀಕೆರೆ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

ಪಿ.ಓ.ಪಿ ಗೌರಿ-ಗಣೇಶ ಪ್ರತಿಮೆಗಳ ಉತ್ಪಾದನೆ, ಸಂಗ್ರಹಣೆ ಹಾಗೂ ಮಾರಾಟ ಮತ್ತು ವಿಸರ್ಜನೆಗೆ ಪ್ಲಾಸ್ಟರ್ ಆಫ್ ಪ್ಯಾರೀಸ್(ಪಿ.ಓ.ಪಿ) ಅಥವಾ ಯಾವುದೇ ರಾಸಾಯನಿಕ ವಸ್ತುಗಳಿಂದ ತಯಾರಿಸಲಾದ ಗಣೇಶ ಮೂರ್ತಿಗಳ ತಯಾರಿಕೆಯನ್ನು ನಗರಸಭೆ ವ್ಯಾಪ್ತಿಯಲ್ಲಿ ನಿಷೇದಿಸಲಾಗಿದೆ, ಪಿ.ಓ.ಪಿ ಗಣೇಶ ಮೂರ್ತಿಗಳ ಸಂಗ್ರಹಣೆ, ಮಾರಾಟ, ವಿತರಣೆ ಹಾಗೂ ಸಾರ್ವಜನಿಕ ಪ್ರದರ್ಶಗಳನ್ನು ಅನುಮತಿಸಲಾಗುವುದಿಲ್ಲ ಹಾಗೂ ಪಿ.ಓ.ಪಿ ಮತ್ತು ರಾಸಾಯನಿಕ ವಸ್ತುಗಳಿಂದ ಕೂಡಿದ ವಿಗ್ರಹಗಳನ್ನು ವಶಕ್ಕೆ ಪಡೆಯಲಾಗುವುದು.

ವಿ?ಕಾರಿ ಅಥವಾ ಭಾರವಾದ ಲೋಹಗಳನ್ನು ಒಳಗೊಂಡಿರುವ ರಾಸಾಯನಿಕ ಬಣ್ಣಗಳಿಂದ ತಯಾರಿಸಲಾದ ಮೂರ್ತಿಗಳ ಉತ್ಪಾದನೆ ಹಾಗೂ ಮಾರಾಟವನ್ನು ಸಂಪೂರ್ಣವಾಗಿ ನಿ?ೀಧಿಸಿದೆ, ಸಾರ್ವಜನಿಕರು ಹಾಗೂ ಗಣೇಶೋತ್ಸವ ಸಮಿತಿಗಳು ನೈಸರ್ಗಿಕ ಮಣ್ಣು (ಕ್ಲೇ) ಹಾಗೂ ಪರಿಸರ ಸ್ನೇಹಿ ವಸ್ತುಗಳಿಂದ ತಯಾರಿಸಲಾದ ಗಣೇಶ ಮೂರ್ತಿಗಳನ್ನು ಮಾತ್ರ ಬಳಸುವುದು.

ನೈಸರ್ಗಿಕ ಹಾಗೂ ವಿ?ರಹಿತ ಬಣ್ಣಗಳಿಂದ ಆಲಂಕರಿಸಲಾದ ಮೂರ್ತಿಗಳನ್ನು ಮಾತ್ರ ತಯಾರಿಸುವುದು ಹಾಗೂ ಮಾರಾಟ ಮಾಡವುದು, ಪಿ.ಓ.ಪಿ ಹಾಗೂ ರಾಸಾಯನಿಕ ಬಣ್ಣಗಳಿಂದ ತಯಾರಿಸಿರುವ ಮೂರ್ತಿಗಳನ್ನು ಕೆರೆ, ನದಿ, ಕಾಲುವೆ, ಜಲಾಶಯ ಹಾಗೂ ಇತರೆ ಜಲ ಮೂಲಗಳಲ್ಲಿ ವಿಸರ್ಜಿಸಲು ಅವಕಾಶವಿರುವುದಿಲ್ಲ, ಗೌರಿ-ಗಣೇಶ ಮೂರ್ತಿಗಳನ್ನು ಪ್ರತಿಸ್ಥಾಪನೆ ಮಾಡುವ ಮೊದಲು ಸಂಬಂದಿಸಿದ ಪೊಲೀಸ್ ಠಾಣೆ ಅನುಮತಿ ಪಡೆದು ನಂತರ ಸಂಬಂಧಿಸಿದ ಪ್ರಾಧಿಕಾರಗಳಿಂದ ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ.

ಮೇಲಿನ ಎಲ್ಲಾ ನಿಭಂದನೆಗಳನ್ನು ಮೀರಿದಲ್ಲಿ ಗೌರಿ-ಗಣೇಶ ಮೂರ್ತಿಗಳನ್ನು ವಶಕ್ಕೆ ಪಡೆದು ತಯಾರಕರು ಹಾಗೂ ಮಾರಾಟಗಾರರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು, ಗೌರಿ-ಗಣೇಶ ಮೂರ್ತಿಗಳನ್ನು ಪ್ರತಿಸ್ಥಾಪನೆ ಮಾಡುವ ಸಂಘ ಸಂಸ್ಥೆಗಳು, ಆಯೋಜಕರು ಹಾಗೂ ಸಾರ್ವಜನಿಕರು ಪ್ರತಿಸ್ಥಾಪನೆಯ 3 ದಿನಗಳ ಮುಂಚಿತವಾಗಿ ಪೊಲೀಸ್ ಇಲಾಖೆ ಹಾಗೂ ಸಂಬಂಧಿಸಿದ ಪ್ರಾಧಿಕಾರಗಳಿಂದ ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ ನಂತರ ಯಾವುದೇ ಅನುಮತಿ ನೀಡುವುದಿಲ್ಲ, ಪ್ರತಿ ಸ್ಥಾಪನೆಯ ಮುಂಚಿತವಾಗಿ ನಗರಸಭೆ ಅಧಿಕಾರಿಗಳು ಹಾಗೂ ಆರೋಗ್ಯ ನಿರೀಕ್ಷಕರು ತಪಾಸಣೆಯ ಸಮಯದಲ್ಲಿ ಅನುಮತಿ ಪತ್ರವನ್ನು ಕಡ್ಡಾಯವಾಗಿ ಹಾಜರು ಪಡಿಸುವುದು ಎಂದು ತಿಳಿಸಿದ್ದಾರೆ.

# ಗಮನ ಸೆಳೆದ ಕೃಷ್ಣ-ರಾಧೆಯರು






**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಪಟ್ಟಣದ ಶ್ರೀ ರಾಮ ಎಜುಕೇಶನಲ್ ಅಂಡ್ ಚಾರಿಟಬಲ್ ಟ್ರಸ್ಟ್‌ಟಿ ಲಿಟಲ್ ಸ್ಟೆಪ್ಸ್ ಪ್ರೀ ಸ್ಕೂಲ್ ವತಿಯಿಂದ ಇಂದು ಶ್ರೀ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ 30 ಕ್ಕೂ ಹೆಚ್ಚು ಮಕ್ಕಳಿಗೆ ಶ್ರೀ ಕೃಷ್ಣ, ರುಕ್ಮಿಣಿ, ರಾಧೆಯ ವೇಷಭೂಷಣ ತೊಡಿಸಿ ಪಟ್ಟಣದ ಪ್ರಮುಖ ರಸ್ತೆಯಲ್ಲಿ ಮೆರವಣಿಗೆ ಮಾಡಲಾಯಿತು. ಇದು ಎಲ್ಲರ ಗಮನ ಸೆಳೆಯಿತು.

ಅಧ್ಯಕ್ಷ ಕುಮಾರ್ ಹೆಚ್.ಆರ್, ಉಪಾಧ್ಯಕ್ಷ ಮೋಹನ್ ಕುಮಾರ್ ಕೆ.ಸಿ. ಕಾರ್ಯದರ್ಶಿ ನಾಗರಾಜ್ (ನವೀನ್), ಗೌತಮ್, ಖಜಾಂಚಿ ವರ್ಷ.ಬಿ, ಜಂಟಿ ಕಾರ್ಯದರ್ಶಿ ಮಾನಸ ಎನ್.ಎಸ್. ಮುಖ್ಯ ಶಿಕ್ಷಕಿ ನಾಗಲಕ್ಷ್ಮೀ ಪಿ, ಬೋಧಕ ವೃಂದದವರು ಸಾರಾ ಫಾತಿಮಾ, ಅಸ್ಫಿಯಾ ಬೇಗಂ, ರಜನಿ ಎಂ.ಎಂ. ನಿಖಿತ ಹೆಚ್.ಎಸ್, ಮತ್ತು ರಾಜಮ್ಮ, ಲಕ್ಷ್ಮಮ್ಮ, ಸೀತಾ ಇದ್ದರು.

# ಗುರುತಿನ ಚೀಟಿ ನೀಡಲು ಕಲಾವಿದರಿಂದ ಅರ್ಜಿ ಆಹ್ವಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 12.06.2024 ರಂದು ನಡೆದ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಡೆಯುವ ಎಲ್ಲಾ ಕಾರ್ಯಕ್ರಮಗಳನ್ನು ಅನೇಕ ಕಲಾತಂಡಗಳಿಗೆ ಅವಕಾಶ ನೀಡುತ್ತಿದ್ದು, ಸದರಿ ಕಲಾವಿದರ ವಿವರಗಳು ಜಿಲ್ಲಾವಾರು - ಕ್ರೂಡೀಕರಿಸುವ ದೃಷ್ಟಿಯಿಂದ ಕಲಾವಿದರು/ ಕಲಾತಂಡಗಳ ಪಟ್ಟಿಯನ್ನು ತಯಾರಿಸಿ ಅವರಿಗೆ ಗುರುತಿನ ಚೀಟಿ ನೀಡಲು ಕ್ರಮಕೈಗೊಳ್ಳಲು ತಿಳಿಸಲಾಗಿತ್ತು ಅದರಂತೆ 2024-25ನೇ ಸಾಲಿನಲ್ಲಿ ಜಿಲ್ಲೆಯ ಎಲ್ಲಾ ಕಲಾವಿದರು /ಕಲಾತಂಡಗಳು ಕಲಾಪ್ರದರ್ಶನ ನೀಡಿದ ದಾಖಲೆಗಳನ್ನು ನಿಗದಿತ ನಮೂನೆಯೊಂದಿಗೆ ಅರ್ಜಿ ಸಲ್ಲಿಸಿದವರಿಗೆ ನೀಡಿ ಗುರುತಿನ ಚೀಟಿಯನ್ನು ವಿತರಣೆ ಮಾಡಲಾಗಿದೆ, ಆದರೆ ಈ ಹಿಂದೆ ಕಲಾವಿದರ ಗುರುತಿನ ಚೀಟಿಗೆ ಅರ್ಜಿ ಸಲ್ಲಿಸದೇ ಇರುವ ಕಲಾವಿದರಿಗೆ ಎರಡನೇ ಹಂತದಲ್ಲಿ ಗುರುತಿನ ಚೀಟಿಯನ್ನು ನೀಡುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ. ಸೆ. 30ರ ಸಂಜೆ 5.30 ರೊಳಗೆ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಸನಾಂಬ ಕಲಾಕ್ಷೇತ್ರ, ಹಾಸನ ಇಲ್ಲಿಗೆ ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕೆಂದು ಹಾಗೂ ಕಲಾವಿದರು / ಕಲಾತಂಡಗಳು ತಾವು ಪರಿಣಿತಿ ಹೊಂದಿರುವ ಕಲಾಪ್ರಕಾರವನ್ನು ಅರ್ಜಿಯಲ್ಲಿ ಸ್ಪಷ್ಟವಾಗಿ ನಮೂದಿಸಿ ಸಲ್ಲಿಸಬೇಕಾಗಿ ಕೋರಿದೆ, ಹೆಚ್ಚಿನ ವಿವರಗಳಿಗೆ ಕಚೇರಿ ವೇಳೆಯಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ, ದೂರವಾಣಿ ಸಂಖ್ಯೆ: 08172267162 ಗೆ ಸಂಪರ್ಕಿಸಬಹುದಾಗಿ ಎಂದು ಕನ್ನಡ ಮತ್ತು ಸಂಸ್ಕೃತ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಸೆ.5 ರಂದು ಪ್ರಜಾ ಸೇವೆ ಆಂದೋಲನ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಅಬಕಾರಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಂ.ಶಿವಲಿಂಗೇಗೌಡ ರವರ ಅಧ್ಯಕ್ಷತೆಯಲ್ಲಿ ಸೆ.5 ರಂದು ಬೆಳಗ್ಗೆ 10.30 ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ತಾಲ್ಲೂಕು ಮಟ್ಟದ ಪ್ರಜಾ ಸೇವೆ ಆಂದೋಲನಾ ಸಭೆ ಕಾರ್ಯಕ್ರವನ್ನು ಆಯೋಜಿಸಿದ್ದು, ಸದರಿ ದಿನದಂದು ಸಭೆ ನಡೆಯುವ ಸಂದರ್ಭದಲ್ಲಿ ಹಾಸನ ತಾಲ್ಲೂಕಿನ ಸಾರ್ವಜನಿಕರು ಖುದ್ದು ಹಾಜರಾಗಿ ತಮ್ಮ ಅಹವಾಲನ್ನು ಸಲ್ಲಿಸುವ ಮೂಲಕ ಸಭೆಯ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಕೆ.ಎಸ್ ಲತಾಕುಮಾರಿ ಅವರು ತಿಳಿಸಿದ್ದಾರೆ.

# ಜಂಬೂಸವಾರಿಯಲ್ಲಿ ಅಭಿಮನ್ಯುವಿಗೆ ಅವಕಾಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು/ಮೈಸೂರು: ಈ ಬಾರಿಯ ದಸರಾ ಮಹೋತ್ಸವದಲ್ಲಿ ಅಭಿಮನ್ಯು ಆನೆ ಭಾಗವಹಿಸಲು ಕೊನೆಗೂ ಸರ್ಕಾರದಿಂದ ಗ್ರೀನ್ ಸಿಗ್ನಲ್ ಸಿಕ್ಕಿದೆ. ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರು ಈ ಸಂಬಂಧ ಅಧಿಕೃತ ಪ್ರಕಟಣೆ ಹೊರಡಿಸಿದ್ದಾರೆ.

ಒಟ್ಟಿನಲ್ಲಿ ಕೋಟ್ಯಂತರ ಅಭಿಮಾನಿಗಳ ಆಸೆಯಂತೆ 6 ಬಾರಿ ಅಂಬಾರಿ ಹೊತ್ತ ಅಭಿಮನ್ಯು ಈ ಬಾರಿ ನಿಶಾನೆ ಆನೆಯಾಗಿ ಜಂಬೂ ಸವಾರಿಯಲ್ಲಿ ಪಾಲ್ಗೊಳ್ಳಲಿದ್ದಾನೆ.

ಮೈಸೂರು ದಸರಾ ಕರ್ನಾಟಕದ ನಾಡಹಬ್ಬವಾಗಿದ್ದು, ನಾಡಿನ ಕಲೆ, ಸಂಸ್ಕೃತಿ, ಪರಂಪರೆ ಹಾಗೂ ವೈಭವವನ್ನು ವಿಶ್ವದಾದ್ಯಂತ ಸಾರುವ ಐತಿಹಾಸಿಕ ಉತ್ಸವವಾಗಿದೆ.

ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂಸವಾರಿ ಉತ್ಸವದಲ್ಲಿ ದಸರಾ ಗಜಪಡೆಯ ಆನೆಗಳು ವರ್ಷಗಳಿಂದಲೂ ಪ್ರಮುಖ ಪಾತ್ರ ವಹಿಸುತ್ತಾ ಬಂದಿವೆ. ಈ ಮಹತ್ವದ ದಸರಾ ಪರಂಪರೆಯಲ್ಲಿ ಅಭಿಮನ್ಯು ಆನೆಯ ಸೇವೆ ಅತ್ಯಂತ ವಿಶೇಷ ಹಾಗೂ ಸ್ಮರಣೀಯವಾಗಿದೆ.

ಹಲವು ವರ್ಷಗಳ ಕಾಲ ದಸರಾ ಮಹೋತ್ಸವದಲ್ಲಿ ಭಾಗವಹಿಸಿ, ಅಂಬಾರಿ ಹೊರುವ ಜವಾಬ್ದಾರಿಯನ್ನು ಅತ್ಯಂತ ಶಿಸ್ತು, ಧೈರ್ಯ ಹಾಗೂ ಯಶಸ್ವಿಯಾಗಿ ನಿರ್ವಹಿಸುವ ಮೂಲಕ ಅಭಿಮನ್ಯು ಆನೆ ನಾಡಿನ ಜನರ ಪ್ರೀತಿ ಮತ್ತು ಗೌರವಕ್ಕೆ ಪಾತ್ರವಾಗಿದೆ.

ಅಭಿಮನ್ಯುವಿನ ದೀರ್ಘಕಾಲದ ಅಮೂಲ್ಯ ಸೇವೆ ಸ್ಮರಿಸುವ ಉದ್ದೇಶದಿಂದ ಇತ್ತೀಚೆಗೆ ಆಯೋಜಿಸಲಾದ ಅಭಿಮನ್ಯು ಆನೆಯ ಬೀಳ್ಕೊಡುಗೆ/ಗೌರವ ಸಮಾರಂಭ ಅತ್ಯಂತ ಯಶಸ್ವಿಯಾಗಿ ಹಾಗೂ ಅಚ್ಚುಕಟ್ಟಾಗಿ ನೆರವೇರಿದ್ದು, ಸಾರ್ವಜನಿಕರು ಹಾಗೂ ದಸರಾ ಅಭಿಮಾನಿಗಳಿಂದ




ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಈ ಕಾರ್ಯಕ್ರಮವು ಅಭಿಮನ್ಯುವಿನ ಸೇವೆಗೆ ಸಲ್ಲಿಸಿದ ಗೌರವದ ಪ್ರತೀಕವಾಗಿದೆ. ಮುಂದುವರಿದ ಭಾಗವಾಗಿ, ಈ ಬಾರಿಯ ಜಂಬೂಸವಾರಿ ಉತ್ಸವದಲ್ಲಿಯೂ ಅಭಿಮನ್ಯುವನ್ನು ಹೆಮ್ಮೆಯಿಂದ ಹಾಗೂ ಗೌರವಪೂರ್ವಕವಾಗಿ ಗಜಪಡೆಯೊಂದಿಗೆ ನಿಶಾನೆ ಆನೆಯಾಗಿ ಈ ವರ್ಷದ ಉತ್ಸವದಲ್ಲಿ ಘನ ಉಪಸ್ಥಿತಿ ವಹಿಸಿ ವಿಶೇಷ ಸ್ಥಾನ ಕಲ್ಪಿಸುವುದು ಸೂಕ್ತವಾಗಿದೆ ಎಂದಿದ್ದಾರೆ.

ಅಭಿಮನ್ಯುವಿನಂತಹ ದಸರಾ ಪರಂಪರೆಯ ಹೆಮ್ಮೆಯ ಆನೆಯ ಹಲವು ವರ್ಷಗಳ ಸೇವೆಯನ್ನು ಗೌರವಿಸುವ ನಿಟ್ಟಿನಲ್ಲಿ ನಿಶಾನೆ ಆನೆಯನ್ನಾಗಿಸಿ, ಇದರ ಸೇವೆ ಸ್ಮರಿಸುವಂತೆ ಸೂಕ್ತ ವ್ಯವಸ್ಥೆ ಹಾಗೂ ಕ್ರಮ ಕೈಗೊಳ್ಳುವಂತೆ ಅವರು ತಿಳಿಸಿದ್ದಾರೆ.

ಇದೇ ವೇಳೆ ಈ ಬಾರಿಯ ಮೈಸೂರು ದಸರಾದ ಸಾಂಸ್ಕೃತಿಕ ಕಾರ್ಯಕ್ರಮ ಯುವ ದಸರಾ ಉದ್ಘಾಟಕರಾಗಿ ನಟ ಪ್ರಭುದೇವಗೆ ರಾಜ್ಯ ಸರ್ಕಾರದಿಂದ ಆಹ್ವಾನ ನೀಡಲಾಗಿದೆ.

# ವಿಬಿಜಿ ರಾಮ್ ಜಿ ಯೋಜನೆಯಡಿ ವರ್ಷದಲ್ಲಿ 125 ದಿವಸ ಉದ್ಯೋಗ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ವಿಬಿಜಿ ರಾಮ್ ಜಿ ಯೋಜನೆಯಡಿ ಒಂದು ನೋಂದಾಯಿತ ಕುಟುಂಬಕ್ಕೆ ವರ್ಷದಲ್ಲಿ 125 ದಿವಸ ಉದ್ಯೋಗ, ಒಂದು ದಿನಕ್ಕೆ ರೂ 382 ಕೂಲಿ ಮೊತ್ತ ನೀಡಲಾಗುತ್ತಿದೆ ಎಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಅರುಣ್ ಕುಮಾರ್ ಅವರು ತಿಳಿಸಿದರು.

ಹಾಸನ ತಾಲ್ಲೂಕು ಮಡೆನೂರು ಗ್ರಾಮ ಪಂಚಾಯಿತಿಯಲ್ಲಿ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಆಜೀವೀಕ ಮಿಷನ್ (ಗ್ರಾಮೀಣ) ಯೋಜನೆಯಡಿ ಜಾಬ್ ಕಾರ್ಡ್ ಮೇಳ ಕಾರ್ಯಕ್ರಮ ಕುರಿತು ಮಾತನಾಡಿದ ಅವರು ಮಡೆನೂರು ಗ್ರಾಮ ಪಂಚಾಯಿತಿಯಲ್ಲಿ ಆಗಸ್ಟ್ 15 ರಿಂದ ಸೆಪ್ಟಂಬರ್ 15 ರವರಿಗೆ ಜಾಬ್ ಕಾರ್ಡ್ ಮೇಳ ಹಮ್ಮಿಕೊಂಡಿದ್ದು ಕಾರ್ಯಕ್ರಮದಡಿ ಮನೆ ಮನೆ ಬೇಟಿ ನೀಡಿ ಕರಪತ್ರ ವಿತರಣೆ ಮಾಡಿ, ಸಾರ್ವಜನಿಕ ಸ್ಥಳಗಳಾದ ಹಾಲಿನ ಡೈರಿ, ಅರಳಿಕಟ್ಟೆ, ಟೀ ಅಂಗಡಿ, ರೇಷನ್ ಅಂಗಡಿ ಮುಂತಾದ ಸ್ಥಳಗಳಲ್ಲಿ ಜಾಬ್ ಕಾರ್ಡ್ ಮೇಳ ಬ್ಯಾನರ್ ಹಿಡಿದು ಆಚರಣೆ ಮಾಡುವ ಮೂಲಕ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಆಜೀವೀಕ ಮಿಷನ್ ಯೋಜನೆ ಬಗ್ಗೆ ಸಂಪೂರ್ಣ



ಮಾಹಿತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಜಾಬ್ ಕಾರ್ಡ್ ಹೊಂದಿರುವ ಎಲ್ಲಾ ಕುಟುಂಬಗಳು ವೈಯಕ್ತಿಕವಾಗಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾನುವಾರು ಕೊಟ್ಟಿಗೆ, ಕೋಳಿ ಶೆಡ್, ಹಂದಿ ಶೆಡ್, ಕುರು ಆಡು ಶೆಡ್ ನಿರ್ಮಾಣ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಹಾಗೂ ತೋಟಗಾರಿಕೆ ಇಲಾಖೆಯಡಿ ತೆಂಗು, ಸೀತಾಫಲ, ಹಲಸು, ಡ್ರಾಗನ್ ಫ್ರೂಟ್, ಅಡಿಕೆ, ದಾಳಿಂಬೆ, ಸಪೋಟ ಬೆಳೆಗಳನ್ನು ಬೆಳೆಯಲು ಆರ್ಥಿಕ ಸಹಾಯಧನ ನೀಡಲಾಗುತ್ತದೆ ಎಂದರು.

ಕೃಷಿ ಇಲಾಖೆಯಡಿ ಕೃಷಿ ಹೊಂಡ, ಗೊಬ್ಬರದ ಗುಂಡಿ, ರೈತರ ಮರು ಪೂರ್ಣ ಘಟಕ ನಿರ್ಮಿಸಲು ಮತ್ತು ರೇಷ್ಮೆ ಇಲಾಖೆಯಡಿ ಕರಿಬೇವು, ಹಿಪ್ಪು ನೇರಳೆ, ಮುಂತಾದ ಕಾಮಗಾರಿ ನಿರ್ಮಾಣ ಮಾಡಿಕೊಳ್ಳಲು ವಿಬಿಜಿ ರಾಮ್ ಜಿ ಯೋಜನೆಯಡಿ ಆರ್ಥಿಕ ನೆರವು ನೀಡಲಾಗುವುದು ಎಂದು ತಿಳಿಸಿದರು.

ಒಂದು ನೋಂದಾಯಿತ ಕುಟುಂಬವು ಜೀವಿತಾವಧಿಯಲ್ಲಿ ವೈಯಕ್ತಿಕ ಕಾಮಗಾರಿ ನಿರ್ಮಾಣಕ್ಕೆ 5 ಲಕ್ಷ ರೂ ವರೆಗೆ ಆರ್ಥಿಕ ನೆರವು ಪಡೆಯಬಹುದು, ಈಗಾಗಲೇ ಕ್ರಿಯಾ ಯೋಜನೆಯಲ್ಲಿ ಅನುಮೋದನೆಯಾಗಿ ಬಂದಿರುವ ವೈಯಕ್ತಿಕ ಕಾಮಗಾರಿಗಳಿಗೆ ಸಾರ್ವಜನಿಕರಿಗೆ ವೈಯಕ್ತಿಕ ಕಾಮಗಾರಿ ನಿರ್ಮಾಣ ಮಾಡಿಕೊಳ್ಳಲು ಮಡೆನೂರು ಗ್ರಾಮ ಪಂಚಾಯಿತಿಯಿಂದ ಕಾರ್ಯದೇಶ ಪ್ರತಿಯನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯತಿ ಸಿಬ್ಬಂದಿ ಹಾಗೂ ಸಾರ್ವಜನಿಕರು ಹಾಜರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248